# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ಪುನರ್ ನೇಮಕಗೊಂಡ ಪ್ರಕರಣಗಳಲ್ಲಿ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ರದ್ದುಗೊಳಿಸುವ ಬಗ್ಗೆ.**

**ಪ್ರಸ್ತಾವನೆ:**

ಸಾರ್ವಜನಿಕ ಹಿತ ದೃಷ್ಟಿಯಿಂದ ಪುನರ್ ನೇಮಕಗೊಂಡ ಪ್ರಕರಣಗಳಲ್ಲಿ ಕ.ನಾ.ಸೇ.ನಿಯಮಾವಳಿ ನಿಯಮ 313 (ಬಿ) ರನ್ವಯ ವೇತನವನ್ನು ನಿಗದಿಗೊಳಿಸಲಾದ ಪ್ರಕರಣಗಳಲ್ಲಿ ನಿಯಮ 118 (2)(x)(ಬಿ) ರನ್ವಯ, ಮರು ನೇಮಕಾತಿ ಅವಧಿಯು ಮುಗಿಯುವ ದಿನದಂದು ಹಕ್ಕಿನಲ್ಲಿರುವ ಗಳಿಕೆ ರಜೆಗೆ ಸಮನಾದ ನಗದು ಹಣವನ್ನು ನೀಡಲಾಗುತ್ತಿದೆ. ನೌಕರರು ನಿವೃತ್ತಿ ಸಮಯದಲ್ಲಿ ಗರಿಷ್ಠ 300 ದಿನಗಳ ಗಳಿಕೆ ರಜೆ ನಗಧೀಕರಣವನ್ನು ಪಡೆಯಲು ಅವಕಾಶವಿದೆ. ಆದ್ದರಿಂದ ಮರು ನೇಮಕಗೊಂಡ ಪ್ರಕರಣಗಳಲ್ಲಿ ಮತ್ತೊಮ್ಮೆ ಗಳಿಕೆ ರಜೆ ನಗಧಿಕರಣ ಸೌಲಭ್ಯವನ್ನು ನೀಡುವುದು ಸೂಕ್ತವಲ್ಲ. ಆದ್ದರಿಂದ ಮುಂದೆ ಇಂತಹ ಪ್ರಕರಣಗಳಲ್ಲಿ ರಜೆ ನಗಧಿಕರಣ ಸೌಲಭ್ಯವನ್ನು ನೀಡದಿರಲು ತೀರ್ಮಾನಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 3(ಇ) ಸೇನಿಸೇ 2020 ಬೆಂಗಳೂರು, ದಿನಾಂಕ:02.05.2020**

ಸಾರ್ವಜನಿಕ ಹಿತ ದೃಷ್ಟಿಯಿಂದ ಪುನರ್ ನೇಮಕಗೊಂಡ ಪ್ರಕರಣಗಳಲ್ಲಿ ಕ.ನಾ.ಸೇ.ನಿಯಮಾವಳಿ ನಿಯಮ 313 (ಬಿ) ರನ್ವಯ ವೇತನವನ್ನು ನಿಗದಿಗೊಳಿಸಲಾದ ಪ್ರಕರಣಗಳಲ್ಲಿ ನಿಯಮ 118(2)(x)(ಬಿ) ರನ್ವಯ, ಮರು ನೇಮಕಾತಿ ಅವಧಿಯು ಮುಗಿಯುವ ದಿನದಂದು ಹಕ್ಕಿನಲ್ಲಿರುವ ಗಳಿಕೆ ರಜೆಗೆ ಸಮನಾದ ನಗದು ಹಣವನ್ನು ನೀಡುವ [ಗಳಿಕೆ ರಜೆ ನಗಧಿಕರಣ] ಸೌಲಭ್ಯವನ್ನು ಕೂಡಲೇ ಜಾರಿಗೆ ಬರುವಂತೆ ರದ್ದುಪಡಿಸಿದೆ.

ಕ.ನಾ.ಸೇ.ನಿಯಮಾವಳಿ ನಿಯಮ 118(2)(x)(ಬಿ)ಕ್ಕೆ ಸೂಕ್ತ ತಿದ್ದುಪಡಿಯನ್ನು ತರಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಬಿ. ಹೇಮಣ್ಣ)
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1).

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.

6. ಜಿಲ್ಲಾ ಪಂಚಾಯತ್‌ಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಜಿ &ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್.ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
8. ಮಹಾಲೇಖಪಾಲರು (ಇ &ಆರ್‌ಎಸ್‌ಎ). ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್.ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
9. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್.ಬಾಕ್ಸ್ ಸಂಖ್ಯೆ-5329/5369, ಪಾರ್ಕ ಹೌಸ್‌ರೋಡ್, ಬೆಂಗಳೂರು.
10. ರಿಜಿಸ್ಟ್ರಾರ್‌ಜನರಲ್, ಕರ್ನಾಟಕಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕನ್ನಡಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆಅಧಿಕಾರಿ, ರಾಜ್ಯ ಹುಜೂರುಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
18. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್‌ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದಗ್ರಂಥಾಲಯ; ವಿಧಾನ ಮಂಡಲದಗ್ರಂಥಾಲಯ.
22. ವಾರಪತ್ರ/ಶಾಖೆಯರಕ್ಷಾಕಡತ.

[ಕ್ರಮ ಸಂಖ್ಯೆ:6 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].
ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ **www.finance.kar.nic.in** ವೀಕ್ಷಿಸಿ.